ಕ್ರಾಂತಿಯ ಕಿಡಿ

# ಕಾಯಕಯೋಗಿ

ಸಂಪಾದಕರು : ಜಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 93 Issue - 93 | RNI No.KARKAN/2018/77805 POST NO. KA/SK/MND/999/2019-2021 | ಭಾನುವಾರ Sunday | 18-07-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|




## ಧೀಮಂತ ನಾಯಕ ಡಾ.ಜಿ.ಮಾದೇಗೌಡ ಎಧಿವಶ

### ಕಳಚಿದ 'ಕಾವೇರಿ' ಹೋರಾಟದ ಕೊಂಡಿ ಶೋಕಸಾಗರದಲ್ಲಿ ಮುಳುಗಿದ ಮಂಡ್ಯಜಿಲ್ಲೆ



ಮಂಡ್ಯ: ಜಿಲ್ಲೆಯ ರಾಜಕೀಯ ಮುತ್ಸದ್ದಿ, ರೈತ ಹೋರಾಟಗಾರ, ಮಾಜಿ ಸಂಸದ ಜಿ. ಮಾದೇಗೌಡರು(92) ಶನಿವಾರ ರಾತ್ರಿ 8 ಗಂಟೆಯ ಸಮಯದಲ್ಲಿ ಕೊನೆಯುಸಿರೆಳೆದಿದ್ದಾರೆ.

ಹಲವು ವರ್ಷಗಳಿಂದ ಶ್ವಾಸಕೋಶ ಸಮಸ್ಯೆಯಿಂದ ಬಳಲುತ್ತಿದ್ದ ಜಿ.ಮಾದೇಗೌಡ ಅವರನ್ನು ಬೆಂಗಳೂರಿನ ವಿಕ್ರಂ ಆಸ್ಪತ್ರೆಯಲ್ಲಿ ದಾಖಲು ಮಾಡಿ ಚಿಕಿತ್ಸೆ ಕೊಡಿಸಲಾಗುತ್ತಿತ್ತು ಆದರೆ ಚಿಕಿತ್ಸೆಗೆ ಸ್ಪಂದಿಸದ ಕಾರಣ ನಂತರ ಮದ್ದೂರು ತಾಲ್ಲೂಕಿನ ಕೆ.ಎಂ.ದೊಡ್ಡಿ ಜಿ. ಮಾದೇಗೌಡ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಐಸಿಯು ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು ಆದರೆ ಇಂದು ಚಿಕಿತ್ಸೆಗೆ ಸ್ಪಂದಿಸದ ಹಿನ್ನೆಲೆಯಲ್ಲಿ ಇಂದು ರಾತ್ರಿ 8 ಗಂಟೆಯ ಸಮಯದಲ್ಲಿ ನಿಧನರಾಗಿದ್ದಾರೆ ಎಂದು ಆಪ್ತರು ತಿಳಿಸಿದ್ದಾರೆ.

ಇನ್ನು ಅನಾರೋಗ್ಯಕ್ಕೆ ತುತ್ತಾಗಿ ಚಿಕಿತ್ಸೆ ಪಡೆಯುತ್ತಿದ್ದ ಮಾದೇಗೌಡರನ್ನು ರಾಜ್ಯದ ಹಲವು ಮಠಾಧೀಶರು, ಮಾಜಿ ಸಂಸದರು ಹಾಗೂ ಸಂಪುಟ ದರ್ಜೆ ಸಚಿವರು, ಉದ್ಯಮಿಗಳು ಹಾಗೂ ಗಣ್ಯರು ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದರು.

**ಇಂದು ಅಂತಿಮದರ್ಶನ**
**ಅಂತ್ಯಕ್ರಿಯೆ**

ಕೆ.ಎಂ.ದೊಡ್ಡಿಯಿಂದ ಜಿ. ಮಾದೇಗೌಡರ ಪಾರ್ಥಿವ ಶರೀರವನ್ನು ಮಂಡ್ಯ ನಗರದ ಗಾಂಧಿ ಭವನಕ್ಕೆ ಬೆಳಿಗ್ಗೆ 10ಗಂಟೆಗೆ ತಂದು ಸಾರ್ವಜನಿಕರ ದರ್ಶನಕ್ಕೆ ಇಡಲಾಗುವುದು. ತದನಂತರ ಬೂದನೂರು, ಗೆಜ್ಜಲಗೆರೆ, ಮದ್ದೂರು ಮಾರ್ಗವಾಗಿ ಕೆ.ಎಂ.ದೊಡ್ಡಿಗೆ ಮೆರವಣಿಗೆಯಲ್ಲಿ ಪಾರ್ಥಿವ ಶರೀರವನ್ನು ತಂದು ಕಾಲೇಜಿನಲ್ಲಿ ದರ್ಶನಕ್ಕೆ ಇಡಲಾಗುವುದು. ಮಧ್ಯಾಹ್ನ 2.30ರ ವೇಳೆಗೆ ಹನುಮಂತನಗರದಲ್ಲಿ ಅಂತ್ಯಸಂಸ್ಕಾರ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಶೋಕಸಾಗರ :**

ಹುಟ್ಟುಹೋರಾಟಗಾರ ರೈತಪರ ಚಿಂತನೆ ಹೊಂದಿದ್ದ ಜಿ. ಮಾದೇಗೌಡರ ಸಾವಿನ ಸುದ್ದಿ ಹರಡುತ್ತಿದ್ದಂತೆಯೇ ಇಡೀ ಜಿಲ್ಲೆಯ ಜನ ಶೋಕಸಾಗರದಲ್ಲಿ ಮುಳುಗಿದ್ದಾರೆ. ಸಂಸದರು, ಶಾಸಕರು, ಜನಪ್ರತಿನಿಧಿಗಳು ಸೇರಿದಂತೆ ವಿವಿಧ ಸಂಘಟನೆಯ ಮುಖಂಡರು ಗೌಡರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

## ಲಿಂಗಾಯತರು ಬಿಜೆಪಿ ಆಸ್ತಿಯಲ್ಲ: ಡಿಕೆಶಿ

ಬೆಂಗಳೂರು : ಬಿಜೆಪಿಯವರು ಲಿಂಗಾಯತರನ್ನು ತಮ್ಮ ಆಸ್ತಿ ಎಂದು ತಿಳಿದುಕೊಂಡಿದ್ದಾರೆ. ಆದರೆ, ಆ ಪಕ್ಷದ ಆಸ್ತಿಯಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ವಿಜಯಪುರ ಜಿಲ್ಲೆಯ ಸಿಂದಗಿ ಪಟ್ಟಣಕ್ಕೆ ತೆರಳಲು ಇಲ್ಲಿನ ವಿಮಾನ ನಿಲ್ದಾಣಕ್ಕೆ ಬಂದಿದ್ದ ಅವರು, ಲಿಂಗಾಯತರಲ್ಲೂ ಸಾಕಷ್ಟು ಜನರು ಕಾಂಗ್ರೆಸ್ ಬೆಂಬಲಿಗರಿದ್ದಾರೆ. ಲಿಂಗಾಯತ ಮುಖಂಡರಾದ ಎಂ.ಬಿ.ಪಾಟೀಲ, ಎಸ್. ಆರ್.ಪಾಟೀಲ, ಈಶ್ವರ ಖಂಡ್ರೆ ಅವರು ಕಾಂಗ್ರೆಸ್ ನಾಯಕರಿದ್ದಾರೆ ಎಂದರು.

ಮುಖ್ಯಮಂತ್ರಿ ಹುದ್ದೆಗಾಗಿ ಕಾಂಗ್ರೆಸ್‌ನಲ್ಲಿ ಮ್ಯೂಸಿಕಲ್ ಚೇರ್ ಆಟ ನಡೆದಿದೆ ಎಂಬ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಅವರಿಗೆ ತಿರುಗೇಟು ನೀಡಿದ ಅವರು, ಬಿಜೆಪಿಯಲ್ಲೇ ಮ್ಯೂಸಿಕಲ್ ಚೇರ್ ಆಟ ನಡೆದಿದೆ ಎಂದರು.

ರಾಜಕೀಯ ಸಮಾವೇಶಗಳಿಗೆ ಕೊರೊನಾ ಪ್ರಯುಕ್ತ ಅವಕಾಶ ಇಲ್ಲದ್ದರಿಂದ ನಾವೇ ವಿವಿಧ ಸಮುದಾಯಗಳನ್ನು ಭೇಟಿ ಮಾಡಿ ಅವರ ಸಮಸ್ಯೆ ಅರಿತುಕೊಳ್ಳುತ್ತಿದ್ದೇವೆ ಎಂದರು.

**ಜೈಕಾರ :** ವಿಮಾನ ನಿಲ್ದಾಣದಿಂದ ಹೊರಗೆ ಬರುತ್ತಿದ್ದಂತೆಯೇ ಕಾರ್ಯಕರ್ತರು ಮುಂದಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಜಯವಾಗಲಿ ಎಂದು ಘೋಷಣೆ ಕೂಗಿದರು.

**ಆಸಕ್ತಿ :** ಕಾಂಗ್ರೆಸ್ ಸೇರಲು ಅನೇಕ ಶಾಸಕರು ಮತ್ತು ಇತರ ರಾಜಕೀಯ ಪಕ್ಷಗಳ ಕಾರ್ಯಕರ್ತರು ಆಸಕ್ತಿ ತೋರಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷದಲ್ಲಿ ಮುಂದಿನ ಮುಖ್ಯಮಂತ್ರಿಯಾಗಲು ಮ್ಯೂಸಿಕಲ್ ಚೇರ್ ಆಟ ಪ್ರಾರಂಭವಾಗಿದೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಆರೋಪಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್, ಮ್ಯೂಸಿಕಲ್ ಚೇರ್ ಆಟ ಆಡುತ್ತಿರುವವರು ಯಾರೂ ಎಂದು ಎಲ್ಲರೂ ತಿಳಿದಿದ್ದಾರೆ. ಯಡಿಯೂರಪ್ಪನವರನ್ನು ಸಿಎಂ ಕುರ್ಚಿಯಿಂದ ಇಳಿಸಲು ಅನೇಕ ಬಿಜೆಪಿ ಶಾಸಕರು ದೆಹಲಿಗೆ ಹೋಗಿ ಬರುತ್ತಿದ್ದಾರೆ. ಇನ್ನು ಯಡಿಯೂರಪ್ಪನವರ ಬೆಂಬಲಿಗರು ಬಿಎಸ್ವೈ ತಲೆದಂಡಕ್ಕೆ ಒತ್ತಾಯಿಸುವವರ ಮೇಲೆ ಕ್ರಮ ಕೈಗೊಳ್ಳುವಂತೆ ಹೈಕಮಾಂಡ್ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷರು ತಿಳಿಸಿದ್ದಾರೆ.

ಚುನಾವಣೆ ಇನ್ನು ದೂರವಿದೆ. ಕೊರೋನಾ ಆತಂಕದಿಂದಾಗಿ ನಾವು ಸಾರ್ವಜನಿಕ ಸಭೆ ನಡೆಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಜನರೊಂದಿಗೆ ಸಂಪರ್ಕದಲ್ಲಿರುವುದು ಮತ್ತು ಅವರ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸುವುದು ರಾಜಕೀಯ ಪಕ್ಷಗಳ ಕರ್ತವ್ಯವಾಗಿದೆ. ಕಾಂಗ್ರೆಸ್ ಮುಖಂಡರು ಮತ್ತು ಪಕ್ಷದ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡುವ ಮೂಲಕ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸುತ್ತಿದ್ದಾರೆ ಎಂದರು.

ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ ಡಾ.ಅಜಯ್ ಸಿಂಗ್, ಮಾಜಿ ಸಚಿವ ಡಾ.ಶರಣಪ್ರಕಾಶ ಪಾಟೀಲ, ವಿಧಾನ ಪರಿಷತ್ ಮಾಜಿ ಸದಸ್ಯ ಎಂದು ಶಿಪ್ಪಣ್ಣಪ್ಪ ಕವಾಟಕನೂರ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಗದೇವ ಗುತ್ತೇದಾರ, ಕಾಂಗ್ರೆಸ್ ಮುಖಂಡರಾದ ಶರಣು ಮೋದಿ, ಡಾ.ಕಿರಣ ದೇಶಮುಖ ಇದ್ದರು.

ಮಂಡ್ಯ ರೈತಸಭಾಂಗಣದ ಬಳಿ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಜಿಲ್ಲಾ ಶಾಖೆ ಆಯೋಜಿಸಿದ್ದ ನಿತ್ಯ ಸಚಿವ ಕೆ.ವಿ.ಶಂಕರಗೌಡ ಜಯಂತಿ ಮತ್ತು ಶಾಮಿಯಾನ ಕಾರ್ಮಿಕರಿಗೆ ಶಾಸಕ ಎಂ.ಶ್ರೀನಿವಾಸ್ ಆಹಾರಧಾನ್ಯ ಕಿಟ್ ವಿತರಿಸಿದರು.

## ಕೃಷಿ ಸಂಶೋಧನೆ ರೈತರಿಗೆ ನೆರವಾಗಬೇಕು

### ರಾಸಾಯನಿಕ ಬಳಕೆಯಿಂದ ರೋಗ ಹೆಚ್ಚಳ : ಶಾಸಕ ಸಿಎಸ್ಪಿ

ಮಂಡ್ಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯ, ವಲಯ ಕೃಷಿ ಸಂಶೋಧನಾ ಕೇಂದ್ರ, ವಿ.ಸಿ. ಫಾರಂ, ಆತ್ಮ ಯೋಜನೆ, ಕೃಷಿ ಇಲಾಖೆ, ರಾಷ್ಟ್ರೀಯ ಕೃಷಿ ವಿಸ್ತರಣಾ ನಿರ್ವಹಣಾ ಸಂಸ್ಥೆ ಇವರ ವತಿಯಿಂದ ತಾಲೂಕಿನ ವಿ.ಸಿ. ಫಾರಂನ ಡಾ.ಲೆಸ್ಲಿ ಕೋಲ್ಮನ್ ಹಾಲ್‌ನಲ್ಲಿ ನಡೆದ ಕೃಷಿ ಪರಿಕರಗಳ ಉದ್ದಿಮೆದಾರರಿಗೆ ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೊಮಾ ಪ್ರಮಾಣ ಪತ್ರ ಪ್ರದಾನ ಸಮಾರಂಭವನ್ನು ಶಾಸಕ ಸಿ.ಎಸ್. ಪುಟ್ಟರಾಜು ಉದ್ಘಾಟಿಸಿ ಮಾತನಾಡಿದರು.

ಒಂದು ಕಡೆ ಜನರನ್ನು ಕೋವಿಡ್-19 ಬಾಧಿಸುತ್ತಿದ್ದರೆ, ಮತ್ತೊಂದೆಡೆ ಆತ್ಮಧಿಕ ಪ್ರಮಾಣದಲ್ಲಿ ರಾಸಾಯನಿಕಗಳ ಬಳಕೆಯಿಂದಾಗಿ ಕೃಷಿಯೂ ರೋಗಬಾಧೆಯಿಂದ ನರಳುತ್ತಿದೆ. ಇಂತಹ ಸಂದರ್ಭದಲ್ಲಿ ಕೃಷಿ ವಿಜ್ಞಾನಿಗಳು ಹೆಚ್ಚಿನ ಸಂಶೋಧನೆಯಲ್ಲಿ ತೊಡಗುವ ಮೂಲಕ ರೈತರ ನೆರವಿಗೆ ಧಾವಿಸಬೇಕು ಎಂದು ಸಲಹೆ ನೀಡಿದರು.

ಗಡಿಯಲ್ಲಿ ಯೋಧರು ಯಾವ ರೀತಿ ದೇಶವನ್ನು ಕಾಯುತ್ತಿದ್ದಾರೋ ಅದೇ ಮಾದರಿಯಲ್ಲಿ ಕೃಷಿ ಪರಿಕರಗಳ ಉದ್ದಿಮೆದಾರರು ಸಹ ದೇಶದ ಆಂತರಿಕ ಯೋಧರಾಗಿ ಕೆಲಸ ನಿರ್ವಹಿಸಬೇಕು. ಹೆಚ್ಚಿನ ಕಮೀಷನ್ ಆಸೆಗೆ ಮಾರುಹೋಗಿ ರೈತರಿಗೆ ಮೋಸ ಮಾಡುವ ಕೆಲಸವನ್ನೂ ಯಾರೂ ಮಾಡಬಾರದು ಎಂದು ಕಿವಿಮಾತು ಹೇಳಿದರು.

ದೇಶದಲ್ಲಿ ಶೇ.70 ರಿಂದ 80 ರಷ್ಟು ಕೃಷಿಯನ್ನೇ ನಂಬಿ ಜೀವನ ನಡೆಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಶೋಧನೆಗಳು ನಡೆಯುವಂತಾಗಬೇಕು. ಕೋವಿಡ್‌ನಿಂದಾಗಿ ಎಲ್ಲ ಕ್ಷೇತ್ರದ ಮೇಲೂ ಪರಿಣಾಮ ಉಂಟಾಗಿತ್ತು ಈಗ ಪರಿಸ್ಥಿತಿ ಸುಧಾರಿಸಿರುವ ಕಾರಣ ಕೃಷಿ ವಿಜ್ಞಾನಿಗಳು ಜವಾಬ್ದಾರಿಯುತವಾಗಿ ಕೆಲಸ ಮಾಡುವುದು ಅಗತ್ಯ ಎಂದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್. ರಾಜೇಂದ್ರಪ್ರಸಾದ್ ಮಾತನಾಡಿ, ಹಿಂದೆಲ್ಲಾ ಹಳ್ಳಿಗಳಲ್ಲಿ ಗ್ರಾಮ ಸೇವಕರು ಕೆಲಸ ಮಾಡುತ್ತಿದ್ದರು. ಆವರಿಂದ ರೈತರು ಮಾಹಿತಿ ಪಡೆದು ಉತ್ತಮ ಕೃಷಿಯನ್ನು ಮಾಡುತ್ತಿದ್ದರು. ಆದರೆ ಈಗ ಅಂತಹ ಪದ್ಧತಿ ಇಲ್ಲ. ಈ ಹಿನ್ನೆಲೆಯಲ್ಲಿ ಕೃಷಿ ಉದ್ದಿಮೆದಾರರೇ ರೈತರಿಗೆ ಮಾಹಿತಿ ನೀಡಬೇಕಾಗಿದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಕೃಷಿ ಉದ್ದಿಮೆದಾರರಿಗೆ ಡಿಪ್ಲೋಮಾ ತರಬೇತಿ ನೀಡುತ್ತಿದ್ದು, ತರಬೇತಿ ಪಡೆದ ಉದ್ದಿಮೆದಾರರು ರೈತರೊಂದಿಗೆ ಉತ್ತಮ ಬಾಂಧವ್ಯ ಇಟ್ಟುಕೊಂಡು ಗ್ರಾಮ ಸೇವಕರ ರೀತಿಯಲ್ಲಿ ಮಾರ್ಗದರ್ಶನ ನೀಡಬೇಕು. ಅದರೊಂದಿಗೆ ವ್ಯವಹಾರವನ್ನು ವೃದ್ಧಿಸಿಕೊಳ್ಳುವುದರ ಜೊತೆಗೆ ರೈತರಿಗೂ ಅನುಕೂಲವಾಗಿಸಿಕೊಡಬೇಕು ಎಂದು ಸಲಹೆ ನೀಡಿದರು.

ಕೃಷಿ ವಿಶ್ವವಿದ್ಯಾಲಯಗಳಲ್ಲಿ ನಡೆಯುವ ಚರ್ಚೆಗೋಷ್ಠಿ, ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಹೊಸ ಹೊಸ ಆವಿಷ್ಕಾರಗಳು, ಸಂಶೋಧನೆಗಳನ್ನೂ ತಿಳಿದು ರೈತರಿಗೆ ಮಾಹಿತಿ ನೀಡುವುದನ್ನು ರೂಢಿಸಿಕೊಳ್ಳಬೇಕು. ಇದೂ ಸಹ ನಿಮ್ಮ ಉದ್ದಿಮೆ ಬೆಳವಣಿಗೆಗೆ ಕಾರಣವಾಗುತ್ತದೆ ಎಂದು ಹೇಳಿದರು.

ಕೃಷಿ ವಿ.ವಿ. ಕುಲಸಚಿವ ಡಾ. ಎನ್. ದೇವಕುಮಾರ್, ವಿಸ್ತರಣಾ ನಿರ್ದೇಶಕ ಡಾ.ಕೆ. ನಾರಾಯಣಗೌಡ, ಜಂಟಿ ಕೃಷಿ ನಿರ್ದೇಶಕ ಡಾ.ಬಿ.ಎಸ್.ಚಂದ್ರಶೇಖರ್, ಡೀನ್ ಡಾ. ವೆಂಕಟೇಶ್, ಸಿಡಾಕ್ ಸಂಸ್ಥೆಯ ಜಂಟಿ ನಿರ್ದೇಶಕ ಅಶ್ವಿನ್‌ಕುಮಾರ್, ಕ್ಷೇತ್ರ ಅಧೀಕ್ಷಕ ಡಾ.ತಿಮ್ಮೇಗೌಡ ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಇದೇ ವೇಳೆ ಕಚೇರಿ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಹಿರಿಯ ನಿವೃತ್ತ ವಿಜ್ಞಾನಿ ಪ್ರೊ.ಗುಬ್ಬಯ್ಯ ಅವರು ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿದರು.

### ಪಿ.ಯು.ಸಿ. ನಂತರದ ಸಿಇಟಿ ಪರೀಕ್ಷೆಗೆ ತರಬೇತಿ

ಮಂಡ್ಯ : ಪಿಯುಸಿ ನಂತರದ ವೃತ್ತಿಪರ ಉನ್ನತ ಶಿಕ್ಷಣಕ್ಕಾಗಿ ಕರ್ನಾಟಕ ಸರ್ಕಾರ ನಡೆಸಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ (ಸಿಇಟಿ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ದ ವತಿಯಿಂದ 30 ದಿನಗಳ ಆನ್‌ಲೈನ್ ತರಬೇತಿಯನ್ನು ನೀಡಲು ನಿರ್ಧರಿಸಲಾಗಿದೆ.

ಆಸಕ್ತರು ಜುಲೈ 23 ರೊಳಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಮುಕ್ತಗಂಗೋತ್ರಿ' ಆವರಣದಲ್ಲಿರುವ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.0821-2515944 ಗೆ ಸಂಪರ್ಕಿಸಬಹುದೆಂದು ಕರಾಮುವಿ ಕುಲಸಚಿವ ಪ್ರೊ. ಆರ್.ರಾಜಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ್ಯ ವಿವಾಹ ನಿಷೇಧ ಅರಿವು ಮೂಡಿಸಿ

### ಜಿಲ್ಲಾಧಿಕಾರಿ ಎಸ್.ಅಶ್ವತಿ

ಮಂಡ್ಯ : ಜಿಲ್ಲೆಯಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ಎಂದು ಜಿಲ್ಲಾಧಿಕಾರಿ ಎಸ್.ಅಶ್ವತಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬಾಲ್ಯ ವಿವಾಹ ನಿಷೇದ ಕಾಯ್ದೆ ಹಾಗೂ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ಮಾನವ ಸಾಗಾಣಿಕೆ) ತಡೆಗಟ್ಟುವ ಸಂಬಂಧ ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಅನುಷ್ಠಾನ ಸಂಬಂಧ ವಸತಿ ನಿಲಯಗಳ ಮೇಲ್ವಿಚಾರಕರಿಗೆ, ದೇವಸ್ಥಾನಗಳ ಪೂಜಾರಿಗಳಿಗೆ, ಮುದ್ರಣಾಲಯಗಳ ಮಾಲೀಕರಿಗೆ, ಕಲ್ಯಾಣ ಮಂಟಪಗಳ ವ್ಯವಸ್ಥಾಪಕರಿಗೆ, ಸಾಮೂಹಿಕ ವಿವಾಹಗಳ ಆಯೋಜಕರಿಗೆ, ಧಾರ್ಮಿಕ ಮುಖಂಡರಿಗೆ ಅಂಗನವಾಡಿ ಕಾರ್ಯಕರ್ತೆಯರಿಗೆ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಅರಿವು ಕಾರ್ಯಗಾರಗಳನ್ನು ಬಹಳ ಪರಿಣಾಮಕಾರಿ ನೀಡಿ ಎಂದರು.

ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಬಾಲ್ಯ ವಿವಾಹದ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಗೋಡೆಬರಹ, ಭಿತ್ತಿ ಚಿತ್ರಗಳು, ಬೀದಿ ನಾಟಕ ಪ್ರದರ್ಶನಗಳ ಮೂಲಕ ಜಾಗೃತಿ ಮೂಡಿಸಿ ಎಂದರು.

ಬಾಲ್ಯ ವಿವಾಹ ತಡೆ ಸಂಬಂಧ ಮಕ್ಕಳ ಗ್ರಾಮ ಸಭೆಯನ್ನು ಪರಿಣಾಮಕಾರಿಯಾಗಿ ನಡೆಸಿ ಎಂದ ಜಿಲ್ಲಾಧಿಕಾರಿಗಳು ಬಾಲ್ಯ ವಿವಾಹ ತಡೆ ಸಂಬಂಧ ಪೊಲೀಸ್ ಇಲಾಖೆ, ಕಂದಾಯ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ ಎಲ್ಲಾ ಇಲಾಖೆ ಸೇರಿ ಮತ್ತೊಂದು ಸಭೆಯನ್ನು ನಡೆಸಲಾಗುವುದು ಎಂದರು.

ಸಭೆಯಲ್ಲಿ ಬಾಲ್ಯ ವಿವಾಹ ನಿಷೇಧ ಮತ್ತು ಮಹಿಳೆಯರು ಹಾಗೂ ಮಕ್ಕಳ ಅನೈತಿಕ ಸಾಗಾಣಿಕೆ ನಿಷೇಧದ ಬಗ್ಗೆ ಗ್ರಾಮ ಪಂಚಾಯತ್ ಮಟ್ಟದ ಕಾವಲು ಸಮಿತಿ ಸದಸ್ಯರಿಗೆ ಉಪಗ್ರಹ ಆಧಾರಿತ ತರಬೇತಿ ಕಾರ್ಯಕ್ರಮವನ್ನು ನಡೆಸಲಾಗಿದೆ ಹಾಗೂ ಪೋಷಣ್ ಅಭಿಯಾನ ಯೋಜನೆಯಡಿ ಜಿಲ್ಲಾ ಕಲಾತಂಡಗಳ ಒಕ್ಕೂಟದ ಮೂಲಕ ಬೀದಿ ನಾಟಕ ಪ್ರದರ್ಶನ ಸಂದರ್ಭದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಬಗ್ಗೆ ಜಾಗೃತಿ ಗೀತೆಗಳು ಮತ್ತು ಅರಿವು ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದರು.

2020-21ನೇ ಸಾಲಿನಲ್ಲಿ ಬಾಲ್ಯವಿವಾಹ ತಡೆದಿರುವ, ನಡೆದಿರುವ ಮತ್ತು ಪ್ರಥಮ ವರ್ಷಮಾನ ವರದಿ ಆಗಿರುವ ಪ್ರಕರಣಗಳನ್ನು ಪರಿಶೀಲನೆ ನಡೆಸಿದರು.

**ಮಾನವ ಕಳ್ಳ ಸಾಗಾಣಿಕೆ ತಡೆಗಟ್ಟಲು ಕ್ರಮವಹಿಸಿ :**

ಜಿಲ್ಲೆಯಲ್ಲಿ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮವಹಿಸಿ ಎಂದರು.

ಜಿಲ್ಲೆಯಲ್ಲಿ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಸಂಬಂಧ ಕೈಗೊಳ್ಳಬಹುದಾದ ಕ್ರಮಗಳ ಕುರಿತು ಚರ್ಚಿಸಿದರು.

2020-21 ನೇಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳ ಪರಿಶೀಲನೆ ನಡೆಸಿದರು.

ಮಾನವ ಸಾಗಾಣಿಕೆ ಸಂಬಂಧ ತಾ